ಸಾಕ್ಷಿಗೆ ಪ್ರಮಾಣ ವಚನವನ್ನು ದಿಃ05-08-2025 ರಂದು ಬೋಧಿಸಲಾಯಿತು.

ಮುಂದುವರೆದ ಪಾಟೀ ಸವಾಲುಃ 1 ರಿಂದ 3 ನೇ ಪ್ರತಿವಾದಿ ಪರ ಶ್ರೀ ಎಂ ಜಿ ಎಚ್ ವಕೀಲರಿಂದಃ

5. ದಾವಾಸ್ತಿಯಲ್ಲಿ ಪ್ರತಿವಾದಿಗಳು ಹೊಸ ಮನೆ ಕಟ್ಟಿರುವ ಬಗ್ಗೆ ದಾಖಲೆಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ. ಪ್ರತಿವಾದಿಗಳು ಹೊಸ ಮನೆ ಕಟ್ಟಿರುವ ಬಗ್ಗೆ ಪಂಚಾಯತ ದಾಖಲೆಗಳನ್ನು ನಾನು ನೋಡಿಲ್ಲ. ದಾವಾಸ್ತಿಯಲ್ಲಿ ಪ್ರತಿವಾದಿಗಳು ಹೊಸ ಮನೆ ಕಟ್ಟಿರುವ ಬಗ್ಗೆ ನನ್ನ ಹೇಳಿಕೆಯನ್ನು ಹೊರತುಪಡಿಸಿ ಯಾವುದೇ ದಾಖಲೆಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿಲ್ಲ ಎಂದರೆ ಸಾಕ್ಷಿಯು ಭಾವಚಿತ್ರವನ್ನು ಹಾಜರುಪಡಿಸಿರುತ್ತೇನೆ ಎಂದು ಉತ್ತರಿಸುತ್ತಾರೆ.

6. ನಾನು ಈ ದಾವೆ ಸಲ್ಲಿಸುವ ಪೂರ್ವದಲ್ಲಿ ಪ್ರತಿವಾದಿಯ ವಿರುದ್ಧ ಓ ಎಸ್ 4/2019 ರಂತೆ ದಾವೆ ಸಲ್ಲಿಸಿದ್ದೆ ಎಂದರೆ ಸರಿ. ಸದರಿ ದಾವೆಗೆ ಸಹಕಾರಿಯಾಗಲಿ ಎಂಬ ಕಾರಣಕ್ಕೆ ಪ್ರತಿವಾದಿಯ ವಿರುದ್ಧ ಈ ಸುಳ್ಳು ದಾವೆ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

7. ನಾನೇ ಪ್ರತಿವಾದಿಗಳಿಗೆ ಒಂದಲ್ಲ ಎಂದು ಕಾರಣಕ್ಕೊಸ್ಕರ ತೊಂದರೆ ನೀಡುತ್ತಿದ್ದೆನೆ ಎಂದರೆ ಸರಿಯಲ್ಲ.

8. ಪ್ರತಿವಾದಿಗೆ ತೊಂದರೆ ಕೊಡುವ ಸಲುವಾಗಿ ಸುಳ್ಳು ದಾವೆ ಸಲ್ಲಿಸಿ ಸುಳ್ಳು ಪ್ರಮಾಣ ಪತ್ರದ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೆನೆ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆಯಲ್ಲಿರುವ ವಿಷಯಗಳು ಸುಳ್ಳು ಎಂದರೆ ಸರಿಯಲ್ಲ.

ಮರುವಿಚಾರಣೆಃ ಇರುವುದಿಲ್ಲ.

(ನನ್ನ ಹೇಳಿಕೆ ಪ್ರಕಾರ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

**ಓ.ಹೇ.ಕೇ. ಸರಿ ಇದೆ,**

**ಸಹಿ ಇದೆ**

**ಸಿವಿಲ್ ನ್ಯಾಯಾಧೀಶರು ಸಿದ್ದಾಪುರ**